# Akashvani : Bangalore
# National Bulletin In Kannada
# 10.01.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.01.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಸಾಧಕ ಅನಿವಾಸಿ ಭಾರತೀಯರಿಗೆ 'ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿ' ಪ್ರದಾನ**

**೨. 'ಮೇಕ್ ಇನ್ ಇಂಡಿಯಾ' ಯೋಜನೆಯಡಿ ೨೦೨೬ ರಿಂದ ಖಾಸಗಿ ಕಂಪನಿಗಳ ಸಹಯೋಗದಲ್ಲಿ ರೈಲು ಚಕ್ರಗಳ ತಯಾರಿಕೆ- ಸಚಿವ ಅಶ್ವಿನಿ ವೈಷ್ಣವ್**

**೩. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆಗೆ ಕೇಂದ್ರ ಸರ್ಕಾರದಿಂದ ಸುಧಾರಣಾತ್ಮಕ ಕ್ರಮ- ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೪. ಮಹಿಳಾ ಏಕದಿನ ಕ್ರಿಕೆಟ್; ಐಲೆಂಡ್ ವಿರುದ್ಧ ಭಾರತ ತಂಡಕ್ಕೆ ಆರು ವಿಕೆಟ್‌ಗಳ ಭರ್ಜರಿ ಗೆಲುವು**

**<><*<><>*><>**

ಅನಿವಾಸಿ ಭಾರತೀಯರು ಜಾಗತಿಕ ಸಮುದಾಯಕ್ಕೆ ಭಾರತದ ನಿಜವಾದ ಚಿತ್ರಣವನ್ನು ಪ್ರತಿನಿಧಿಸುತ್ತಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟರು. ಒಡಿಶಾದ ಭುವನೇಶ್ವರದ ಜನತಾ ಮೈದಾನದಲ್ಲಿ ಇಂದು ನಡೆದ ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ವೈದ್ಯಕೀಯ ಮತ್ತು ತಂತ್ರಜ್ಞಾನ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಅನಿವಾಸಿ ಭಾರತೀಯರು ಉತ್ತಮ ಸಾಧನೆ ಮಾಡಿದ್ದಾರೆ ಎಂದರು.

**ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು**

ಇದಕ್ಕೂ ಮುನ್ನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಅನಿವಾಸಿ ಭಾರತೀಯ ಸದಸ್ಯರಿಗೆ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಗಳನ್ನು ರಾಷ್ಟ್ರಪತಿ ಪ್ರದಾನ ಮಾಡಿದರು. ಕೇಂದ್ರ ಸಚಿವರಾದ ಡಾ. ಎಸ್.ಜೈಶಂಕರ್, ಜುವಾಲ್ ಓರಂ, ಧರ್ಮೇಂದ್ರ ಪ್ರಧಾನ್, ಒಡಿಶಾ ರಾಜ್ಯಪಾಲ ಹರಿ ಬಾಬು ಕಂಭಂಪತಿ, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಉಪಸ್ಥಿತರಿದ್ದರು.

ಇದಕ್ಕೂ ಮೊದಲು, ರಾಷ್ಟ್ರಪತಿಗಳು 'ಒಡಿಶಾ ಮಂಟಪ' ಸೇರಿದಂತೆ ವಿವಿಧ ಮಳಿಗೆಗಳಿಗೆ ಭೇಟಿ ನೀಡಿದರು. ಈ ಮಂಟಪವು ಕುಶಲಕರ್ಮಿಗಳನ್ನು ಉತ್ತೇಜಿಸುವ ಜೊತೆಗೆ ಒಡಿಶಾದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಜಗತ್ತಿಗೆ ಪರಿಚಯಿಸುವ ಗುರಿಯನ್ನು ಹೊಂದಿದೆ. ಲಿಂಗ ಸಮಾನತೆ ಮತ್ತು ಮಹಿಳಾ ಅಭಿವೃದ್ಧಿಯು, ಭಾರತದ ವಿದೇಶಾಂಗ ನೀತಿ ಮತ್ತು ಅಂತಾರಾಷ್ಟ್ರೀಯ ಸಂಬಂಧಗಳ ಅವಿಭಾಜ್ಯ ಅಂಗವಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಒಡಿಶಾದ ಭುವನೇಶ್ವರದಲ್ಲಿ ಇಂದು ನಡೆದ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ನಾಲ್ಕನೇ ಸಮಗ್ರ ಅಧಿವೇಶನದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾಮಾಜಿಕ ಬದಲಾವಣೆಯು ಗೋಚರ ಮತ್ತು ಸರಳ ಸವಾಲುಗಳನ್ನು ಎದುರಿಸುವುದಕ್ಕಿಂತ ಹೆಚ್ಚಿನದನ್ನು ಒಳಗೊಂಡಿದೆ ಎಂದರು. ತಾರತಮ್ಯವು ಹೆಚ್ಚಾಗಿ ಕುಟುಂಬ ಮಟ್ಟದಲ್ಲಿ, ಹುಟ್ಟಿನಿಂದಲೇ ಪ್ರಾರಂಭವಾಗುತ್ತದೆ ಹಾಗೂ ಪೋಷಣೆ, ಆರೋಗ್ಯ ಮತ್ತು ಶಿಕ್ಷಣದಂತಹ ಸಂಪನ್ಮೂಲಗಳಲ್ಲಿ ಪ್ರತಿಫಲಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

**<><*<><>*><>**

೨೦೪೭ ರೊಳಗೆ ವಿಕಸಿತ ಭಾರತ ನಿರ್ಮಾಣದ ನಿಟ್ಟಿನಲ್ಲಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬೇಕಿದೆ. ಸಾಮಾಜಿಕ ನ್ಯಾಯ ಹಾಗೂ ಜಾತ್ಯತೀತವಾಗಿ ಸರ್ಕಾರದ ಎಲ್ಲಾ ಯೋಜನೆಗಳು ಶೇಕಡ ೧೦೦ ರಷ್ಟು ತಲುಪಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕರ್ನಾಟಕ ಮೂಲದ ಖಾಸಗಿ ಉದ್ಯಮಿ ನಿಖಿಲ್ ಕಾಮತ್ ಅವರೊಂದಿಗಿನ ಸಂದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ರಾಜಕೀಯದಲ್ಲಿ ಯಶಸ್ವಿಯಾಗಲು ಉತ್ತಮ ನಾಯಕರಾಗಿರಬೇಕು. ಸಮರ್ಪಣಾ ಭಾವ ಹಾಗೂ ಬದ್ಧತೆಯನ್ನು ಹೊಂದಿರಬೇಕು. ಅಷ್ಟೇ ಅಲ್ಲದೆ ಜನರಿಗೆ ಸುಲಭವಾಗಿ ಲಭ್ಯರಿರಬೇಕು ಎಂದರು. ಸದುದ್ದೇಶ ಹೊಂದಿರುವವರು ರಾಜಕೀಯಕ್ಕೆ ಪ್ರವೇಶ ಮಾಡಿದರೆ ಒಳ್ಳೆಯದು. ಅವರಿಗೆ ಕೇವಲ ಮಹಾತ್ವಾಕಾಂಕ್ಷೆ ಮಾತ್ರವಲ್ಲದೆ, ಸಮಾಜ ಸೇವೆಯ ಬದ್ಧತೆ ಇರಬೇಕು ಎಂದು ಅವರು ಅಭಿಪ್ರಾಯಪಟ್ಟರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

**<><*<><>*><>**

ಕಡಿಮೆ ಆದಾಯದ ಜನರಿಗೆ ಉತ್ತಮ ಗುಣಮಟ್ಟದ ಸೇವೆ ಒದಗಿಸಲು ಶೀಘ್ರದಲ್ಲೇ ೫೦ ನೂತನ ಅಮೃತ್ ಭಾರತ್ ರೈಲುಗಳನ್ನು ಪರಿಚಯಿಸಲಾಗುವುದು. ಈ ರೈಲುಗಳ ಟಿಕೆಟ್ ದರ ಕೈಗೆಟುಕುವ ಬೆಲೆಯಲ್ಲಿ ಇರಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿಗೆ ಇಂದು ಭೇಟಿ ನೀಡಿದ ಅವರು, ರೈಲ್ವೆ ಮೂಲಸೌಕರ್ಯದಲ್ಲಿನ

ಪ್ರಗತಿಯನ್ನು ಪರಿಶೀಲಿಸಿದರು. ಇದೇ ವೇಳೆ, ಮಾದರಿ ಶೌಚಾಲಯಗಳು, ತುರ್ತು ವ್ಯವಸ್ಥೆಗಳು, ಅಗ್ನಿಶಾಮಕ ಸುರಕ್ಷತೆ ಸೇರಿದಂತೆ ಅಮೃತ್ ಭಾರತ್ ರೈಲುಗಳಲ್ಲಿ ಕೈಗೊಳ್ಳಲಾಗಿರುವ ಉನ್ನತೀಕರಿಸಿದ ಸೌಲಭ್ಯಗಳನ್ನು ಸಚಿವರು ಅನಾವರಣಗೊಳಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ದೇಶವಾಸಿಗಳಿಗೆ ಜಾಗತಿಕ ಮಟ್ಟದ ಸೌಲಭ್ಯಗಳನ್ನು ಒದಗಿಸುವ ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನದ ಸಾಕಾರಕ್ಕೆ ಅಮೃತ್ ಭಾರತ್ ೨.೦ ಯೋಜನೆಗೆ ಚಾಲನೆ ನೀಡಲಾಗಿದೆ ಎಂದರು. ಪ್ರಯಾಣಿಕರ ಸೌಕರ್ಯ ಮತ್ತು ಸುರಕ್ಷತೆಗಾಗಿ ೧೨ ಮಹತ್ವದ ಬದಲಾವಣೆಗಳೊಂದಿಗೆ ಅಮೃತ್ ಭಾರತ್ ರೈಲು ಕೋಚ್‌ಗಳ ಉನ್ನತೀಕರಣ ಕುರಿತು ಅವರು ವಿವರಿಸಿದರು.

**<><*<><>*><>**

೨೦೨೬ ರಿಂದ ಮೇಕ್ ಇನ್ ಇಂಡಿಯಾ ಯೋಜನೆಯಡಿ ಖಾಸಗಿ ಕಂಪನಿಗಳ ಸಹಯೋಗದೊಂದಿಗೆ ರೈಲು ಚಕ್ರಗಳನ್ನು ತಯಾರಿಸಲಾಗುತ್ತದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ತಮಿಳುನಾಡಿನ ತಿರುವಳ್ಳೂರಿನಲ್ಲಿ ಇಂದು ರಾಮಕೃಷ್ಣ ಫೋರ್ಜಿಂಗ್ಸ್ ಲಿಮಿಟೆಡ್ ಮತ್ತು ತಿತಾಘರ್ ರೈಲ್ ಸಿಸ್ಟಮ್ಸ್ ಕಂಪನಿಯ ಚಕ್ರ ಉತ್ಪಾದನಾ ಘಟಕಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭವಿಷ್ಯದಲ್ಲಿ ರೈಲ್ವೇಗೆ ೮೦ ಸಾವಿರಕ್ಕೂ ಹೆಚ್ಚು ಶಕ್ತಿಯುತ ರೈಲು ಚಕ್ರಗಳ ಅಗತ್ಯವಿದೆ ಎಂದು ಹೇಳಿದರು. ಜಾಗತಿಕವಾಗಿ ಗುಣಮಟ್ಟದ ವಸ್ತುಗಳ ತಯಾರಿಕೆಯಲ್ಲಿ ಸ್ವಾವಲಂಬಿ ಬಲಿಷ್ಠ ಭಾರತವನ್ನು ರಚಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಭಾರತದಲ್ಲಿ ತಯಾರಾಗುವ ರೈಲು ಚಕ್ರಗಳನ್ನು ಇತರೆ ದೇಶಗಳಿಗೂ ರಫ್ತು ಮಾಡಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

**<><*<><>*><>**

ಸ್ವಾವಲಂಬನೆ ಮತ್ತು ತಾಂತ್ರಿಕ ಸಹಯೋಗಗಳನ್ನು ಬೆಳೆಸುವ ಮೂಲಕ ದೃಢವಾದ ರಕ್ಷಣಾ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ರಚಿಸಲು ಸರ್ಕಾರವು ಪರಿವರ್ತನಾತ್ಮಕ ನೀತಿ ಸುಧಾರಣೆಗಳನ್ನು ಕೈಗೊಳ್ಳುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಏರೋ ಇಂಡಿಯಾ ೨೦೨೫ ಕ್ಕೆ ಪೂರ್ವಭಾವಿಯಾಗಿ ನವದೆಹಲಿಯಲ್ಲಿ ಇಂದು ನಡೆದ ರಾಯಭಾರಿಗಳ ದುಂಡು ಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ನಾಲ್ಕನೇ ತಲೆಮಾರಿನ ಯುದ್ಧ ವಿಮಾನಗಳು, ಪರಮಾಣು ಜಲಾಂತರ್ಗಾಮಿ ನೌಕೆಗಳು, ಪ್ರಮುಖ ಯುದ್ಧ ಟ್ಯಾಂಕ್‌ಗಳು ಮತ್ತು ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಉತ್ಪಾದಿಸುವ ಸಾಮರ್ಥ್ಯವಿರುವ ಆಯ್ದ ರಾಷ್ಟ್ರಗಳ ಗುಂಪಿನಲ್ಲಿ ಭಾರತ ಈಗ ಸೇರಿದೆ ಎಂದರು. ಸಿ-೨೯೫ ವಿಮಾನ ಉತ್ಪಾದನಾ ಘಟಕದ ಸ್ಥಾಪನೆಯು ರಕ್ಷಣೆಯಲ್ಲಿ ಅಂತಾರಾಷ್ಟ್ರೀಯ ಸಹಯೋಗವನ್ನು ಬೆಳೆಸುವ ದೇಶದ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು. ಹೊಸ ಉದ್ಯಮಗಳು ಮತ್ತು ಪಾಲುದಾರಿಕೆಗಳನ್ನು

ಬಯಸುವ ವಿದೇಶಿ ಕಂಪನಿಗಳಿಗೆ ಭಾರತೀಯ ಏರೋಸ್ಪೇಸ್ ಮತ್ತು ರಕ್ಷಣಾ ವಲಯವು ಗಮನಾರ್ಹ ಅವಕಾಶಗಳನ್ನು ಒದಗಿಸುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರತಿಪಾದಿಸಿದರು.

**<><*<><>*><>**

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿಂದು ೨೦೨೫ರ ಮಹಾಕುಂಭಕ್ಕಾಗಿ ಆಕಾಶವಾಣಿಯ ವಿಶೇಷ ವಾಹಿನಿ ಕುಂಭವಾಣಿಗೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಇಂದು ಚಾಲನೆ ನೀಡಿದರು. ಇದೇ ವೇಳೆ, ಕುಂಭ ಮಂಗಳ ಧುನ್‌ಗೆ ಅವರು ಚಾಲನೆ ನೀಡಿದ್ದು, ಕಾರ್ಯಕ್ರಮದಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ವರ್ಚುಯಲ್ ಮೂಲಕ ಭಾಗವಹಿಸಿದ್ದರು. ಪ್ರಸಾರ ಭಾರತಿ ಅಧ್ಯಕ್ಷ ಡಾ.ನವನೀತ್ ಕುಮಾರ್ ಸೆಹಗಲ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ, ಆಕಾಶವಾಣಿ ಮಹಾನಿರ್ದೇಶಕಿ ಡಾ.ಪ್ರಜ್ಞಾ ಪಾಲಿವಾಲ್ ಗೌರ್, ದೂರದರ್ಶನ ನಿರ್ದೇಶಕ ಕಾಂಚನ್ ಪ್ರಸಾದ್ ಸಹ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.  ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮಹಾಕುಂಭ ಜಾತಿ, ಮತ ಹಾಗೂ ಅಸಮಾನತೆಯನ್ನು ಮೀರಿದ ಮತ್ತು ಏಕತೆ ಸಂದೇಶ ಸಾರುತ್ತದೆ ಎಂದು ಹೇಳಿದರು.  ಕುಂಭವಾಣಿ ವಾಹಿನಿ ಇಂದಿನಿಂದ ಆರಂಭಗೊಂಡು ಫೆಬ್ರವರಿ ೨೬ರವರೆಗೆ, ಬೆಳಗ್ಗೆ ೫.೫೫ ರಿಂದ ರಾತ್ರಿ ೧೦.೦೫ರ ವರೆಗೆ ಮಹಾಕುಂಭ ಮೇಳದ ಪ್ರತಿ ಚಟುವಟಿಕೆ ಆಧರಿತ ವಿಶೇಷ ಕಾರ್ಯಕ್ರಮಗಳನ್ನು ಪ್ರಸಾರ ಮಾಡಲಿದೆ.  ಅಮೃತ ಸ್ನಾನದ ನೇರ ವೀಕ್ಷಕ ವಿವರಣೆ ಇದರಲ್ಲಿ ಮೂಡಿಬರಲಿದ್ದು, ಕುಂಭವಾಣಿಯನ್ನು ೧೦೩.೫ ತರಂಗಾಂತರ, ನ್ಯೂಸ್ ಆನ್ ಏರ್ ಆಪ್ ಹಾಗೂ ವೇವ್ಸ್ ಒಟಿಟಿ ವೇದಿಕೆಯಲ್ಲೂ ಆಲಿಸಬಹುದಾಗಿದೆ.

**<><*<><>*><>**

ಗುಜರಾತ್‌ನ ರಾಜ್‌ಕೋಟ್‌ನಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಮಹಿಳಾ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿಂದು ಐರ್ಲೆಂಡ್ ತಂಡದ ವಿರುದ್ಧ ಭಾರತ ವನಿತಾ ತಂಡ ೬ ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಐರ್ಲೆಂಡ್ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೩೮ ರನ್ ಗಳಿಸಿತು. ಗುರಿ ಬೆನ್ನತ್ತಿದ  ಭಾರತ ವನಿತಾ ತಂಡ,  ೩೪.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೪೧ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಈ ಮೂಲಕ ಸರಣಿಯಲ್ಲಿ ಭಾರತ ೧-೦ ಅಂತರದ ಮುನ್ನಡೆ ಸಾಧಿಸಿದೆ.

**<><*<><>*><>**